ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಹಳೆ ಪಿಂಚಣಿ ಪದ್ಧತಿಯನ್ನು ಜಾರಿಗೆ ತರುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :-

78 (35) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ : 01-04-2006ರ ನಂತರ ನೇಮಕಾತಿ ಹೊಂದಿದ ಶಿಕ್ಷಕರಿಗೆ ಹೊಸ ಪಿಂಚಣಿ ಪದ್ಧತಿಯನ್ನು ರದ್ದುಪಡಿಸಿ, ಹಳೆ ಪಿಂಚಣಿ ಪದ್ಧತಿಯನ್ನು ಜಾರಿಗೆ ತರದೇ ಇರುವುದರಿಂದ ನಿವೃತಿ ಹೊಂದುತ್ತಿರುವ ಸರ್ಕಾರಿ/ಅನುದಾನಿತ ಶಾಲಾ ಶಿಕ್ಷಕರು ನಿವೃತ್ತಿ ನಂತರ ಜೀವನ ನಡೆಸುವುದು ತುಂಬಾ ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಳೆ ಪಿಂಚಣಿ ಪದ್ಧತಿಯನ್ನು ಜಾರಿಗೆ ತರುವಲ್ಲಿ ಸರ್ಕಾರದ ಸ್ಪಷ್ಟ ನಿಲುವೇನು ?